# <u>ಸಿಟಿಜನ್ ಚಾರ್ಟರ್</u>

ಕರ್ನಾಟಕ ಲೋಕಾಯುಕ್ತ ಅಧಿನಿಯಮವನ್ನು 1986ನೇ ಇಸವಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಜಾರಿಗೊಳಿಸಲಾಯಿತು. ಕರ್ನಾಟಕ ಲೋಕಾಯುಕ್ತ ಕಾಯ್ದೆ, ಕೆ.ಸಿ.ಎಸ್. (ಸಿಸಿಎ) ನಿಯಮಗಳು ಮತ್ತು 1988 ಅನ್ನು ಅನುಷ್ಠಾನಗೊಳಿಸಲು ಸರ್ಕಾರ ಈ ಸಂಸ್ಥೆಯನ್ನು ರಚಿಸಿರುತ್ತದೆ. ಈ ಸಂಸ್ಥೆಯಲ್ಲಿ ಕೆಳಕಂಡ ಮೂರು ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ:-

***I. ಆಡಳಿತ ಶಾಖೆ***: 1. ಈ ಶಾಖೆಗೆ ನಿಬಂಧಕರು ಇಲಾಖಾ ಮುಖ್ಯಸ್ಥರಾಗಿರುತ್ತಾರೆ. ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಅಪರ ನಿಬಂಧಕರು (ವಿಚಾರಣೆ), ಉಪ ನಿಬಂಧಕರುಗಳು (ವಿಚಾರಣೆ), ಸಹಾಯಕ ನಿಬಂಧಕರು (ಆಡಳಿತ), ಕಾನೂನು ಕೋಶ, ಅಭಿಯೋಜಕರು, ಸಹಾಯಕ ಅಭಿಯೋಜಕರು, ಅಲ್ಲದೇ ಈ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರೆ ಅಧಿಕಾರಿಗಳು ನಿಬಂಧಕರ ಆಡಳಿತಕ್ಕೆ ಒಳಪಟ್ಟಿರುತ್ತಾರೆ.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದೂರು ಸ್ವೀಕರಿಸುವ ಹಾಗೂ ಅಧಿಕಾರಿಗಳಿಗೆ ವಿತರಿಸುವ ಪ್ರಾಧಿಕಾರಿಯಾಗಿರುತ್ತಾರೆ.

3. ಸರ್ಕಾರ ಹಾಗೂ ಇತರೆ ಇಲಾಖೆಗಳಿಗೆ ಈ ಸಂಸ್ಥೆಗೆ ಸಂಬಂಧಪಟ್ಟ ವಿಚಾರಣೆಗಳನ್ನು ನೇರವಾಗಿ ಸಂಪರ್ಕ ವ್ಯವಹಾರ ಮಾಡುವ ಪ್ರಾಧಿಕಾರಿಯಾಗಿತ್ತಾರೆ.

4. ಲೋಕಾಯುಕ್ತ ಕಾಯ್ದೆಯಡಿಯಲ್ಲಿ ತನಿಖೆ ಮಾಡಿದ ಪ್ರಕರಣಗಳನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಿದ ನಂತರ ಅವುಗಳ ಮೇಲೆ ಸರ್ಕಾರವು ಕ್ರಮ ಕೈಗೊಂಡು ಇಲಾಖಾ ವಿಚಾರಣೆಗಳಿಗೆ ಆದೇಶಿಸಿದ ನಂತರ ಗೌರವಾನ್ವಿತ ಲೋಕಾಯುಕ್ತರು/ಗೌರವಾನ್ವಿತ ಉಪಲೋಕಾಯುಕ್ತರವರ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಅಧಿಕಾರಿಗಳು/ನೌಕರರ ವಿರುದ್ಧ ಇಲಾಖಾ ವಿಚಾರಣೆ ಮಾಡಿ ಆಪಾದಿತ ಅಧಿಕಾರಿ/ನೌಕರರ ವಿರುದ್ಧ ಶಿಫಾರಸ್ಸು ಮಾಡಿದ ಪ್ರಕರಣಗಳಲ್ಲಿ ಸರ್ಕಾರಕ್ಕೆ ವರದಿಯನ್ನು ರವಾನಿಸುವ ಪ್ರಾಧಿಕಾರಿಯಾಗಿತ್ತಾರೆ.

5. ಮಾಹಿತಿ ಪಡೆಯಲು ಮಾಹಿತಿ ಹಕ್ಕು ಅಧಿನಿಯಮದ ಅಡಿಯಲ್ಲಿ ಈಗಾಗಲೇ ನಿಬಂಧಕರನ್ನು ಮಾಹಿತಿಯನ್ನು ನೀಡುವ ಪ್ರಾಧಿಕಾರಿಗಳೆಂದು ಘೋಷಿಸಿ ಸರ್ಕಾರಕ್ಕೆ ತಿಳಿಸಲಾಗಿದೆ.

6. ನಿಬಂಧಕರು ಈ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಗ್ರೂಪ್ ಸಿ ಮತ್ತು ಡಿ ನೌಕರರಿಗೆ ಶಿಸ್ತಿನ ಪ್ರಾಧಿಕಾರಿಗಳಾಗಿರುತ್ತಾರೆ. ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 15 ರ ಅಡಿಯಲ್ಲಿ ಇತರೆ ನಿಯೋಜಿಸಲ್ಪಟ್ಟ ಅಧಿಕಾರಿಗಳಿಗೆ ಗೌರವಾನ್ವಿತ ಲೋಕಾಯುಕ್ತರವರ ಶಿಸ್ತು ನಿಯಂತ್ರಣದಲ್ಲಿ ಕೆಲಸ ನಿರ್ವಹಿಸಲು ಸದರಿ ನಿಯಮದಲ್ಲಿ ಆಸ್ಪದವಿರುತ್ತದೆ.

7. ಸಾರ್ವಜನಿಕರ ಅನುಕೂಲಕ್ಕಾಗಿ ಲೋಕಾಯುಕ್ತ ಕಚೇರಿಯಲ್ಲಿ ಸ್ವೀಕರಿಸುವ ದೂರುಗಳನ್ನು ಗಣಕೀಕೃತಗೊಳಿಸಲಾಗಿದ್ದು, ವ್ಯವಸ್ಥಿತವಾಗಿ ಮಾಹಿತಿಯನ್ನು ಪಡೆಯಲು ಸಹಾಯಕವಾಗಿರುತ್ತದೆ. ಅಲ್ಲದೇ ಈ ಸಂಸ್ಥೆಯ ವೆಬ್‌ಸೈಟ್ www.lokayukta.kar.nic.in ನಲ್ಲಿಯೂ ಸಹ ಲಭ್ಯವಿರುತ್ತದೆ.

***II ಪೊಲೀಸ್ ವಿಭಾಗ***: ಈ ವಿಭಾಗವು ಅಪರ ಪೊಲೀಸ್ ಮಹಾನಿರ್ದೇಶಕರವರ ನೇತೃತ್ವದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಜಿಲ್ಲಾ ಮಟ್ಟದಲ್ಲಿ ಪೊಲೀಸ್ ಅಧೀಕ್ಷಕರು, ಪೊಲೀಸ್ ಉಪಾಧೀಕ್ಷಕರು/ಪೊಲೀಸ್ ನಿರೀಕ್ಷಕರು, ಲೋಕಾಯುಕ್ತ ಕಾಯ್ದೆ ಅಡಿಯಲ್ಲಿ ದೂರುಗಳನ್ನು ಸ್ವೀಕರಿಸಿ, ಮುಂದಿನ ಕ್ರಮಕ್ಕಾಗಿ ಕೇಂದ್ರ ಕಚೇರಿಗೆ ಕಳುಹಿಸಿಕೊಡುತ್ತಾರೆ. ಸದರಿ ಕಾಯ್ದೆಯಡಿಯಲ್ಲಿ ಆರೋಪಕ್ಕೊಳಗಾದ ಅಧಿಕಾರಿಗಳು/ನೌಕರರನ್ನು ಗೌರವಾನ್ವಿತ ಲೋಕಾಯುಕ್ತರು ಮತ್ತು ಗೌರವಾನ್ವಿತ ಉಪಲೋಕಾಯುಕ್ತರವರು ಕೆ.ಸಿ.ಎಸ್ (ಸಿಸಿಎ) ನಿಯಮ 14–ಎ ರ ಪ್ರಕಾರ ಇಲಾಖಾ ವಿಚಾರಣೆಗೆ ಗುರಿಪಡಿಸಲು ಅವಕಾಶವಿರುತ್ತದೆ.

***III ತಾಂತ್ರಿಕ ವಿಭಾಗ***:– ಈ ವಿಭಾಗವು ಮುಖ್ಯ ಅಭಿಯಂತರರು ಅವರ ನೇತೃತ್ವದಲ್ಲಿ ಕಾರ್ಯನಿರ್ವಹಿಸುತ್ತದೆ. ಅಧೀಕ್ಷಕ ಅಭಿಯಂತರರು, ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ ಅಭಿಯಂತರರು ಹಾಗೂ ಉಪ ನಿಯಂತ್ರಕರು (ಅಕೌಂಟ್ಸ್) ಅವರುಗಳು ಮುಖ್ಯ ಅಭಿಯಂತರವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಾರೆ.

ಲೋಕಾಯುಕ್ತ ಕಾರ್ಯ್ದೆಯಡಿಯಲ್ಲಿ ಸ್ವೀಕರಿಸಿದ ದೂರುಗಳನ್ನು ಲೋಕೋಪಯೋಗಿ ಇಲಾಖೆ, ನೀರಾವರಿ ಇಲಾಖೆ ಹಾಗೂ ಇತರೆ ತಾಂತ್ರಿಕ ಇಲಾಖೆಗೆ ಸಂಬಂಧಿಸಿದ ಅಧಿಕಾರಿಗಳು/ನೌಕರರ ವಿರುದ್ಧ ದೂರು ಇದ್ದಲ್ಲಿ ಮತ್ತು ಲೆಕ್ಕ ಪತ್ರಗಳಿಗೆ ಸಂಬಂಧಿಸಿದ ದೂರುಗಳಿದ್ದಲ್ಲಿ ಅಂತಹ ಪ್ರಕರಣಗಳನ್ನು ತಾಂತ್ರಿಕ ವಿಭಾಗದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿಗಳಿಂದ ತನಿಖೆ ಮಾಡಿಸಿ ವರದಿ ಪಡೆಯಲಾಗುತ್ತಿದೆ. ನಂತರ ಅವರುಗಳ ವರದಿಯಲ್ಲಿ ಆರೋಪಗಳು ಸಾಬೀತು ಆದ ಪ್ರಕರಣಗಳಲ್ಲಿ ನಿಯಮಗಳ ಪ್ರಕಾರ ಸರ್ಕಾರಕ್ಕೆ ಮುಂದಿನ ಕ್ರಮಕ್ಕಾಗಿ ಶಿಫಾರಸ್ಸು ಮಾಡಲಾಗುತ್ತದೆ.

ಸರ್ಕಾರಿ ನೌಕರರು ತಮ್ಮ ಕೆಲಸಗಳಲ್ಲಿ ಸಾರ್ವಜನಿಕರಿಗೆ ಅನಗತ್ಯ ವಿಳಂಬ, ಕಿರುಕುಳ ನೀಡುತ್ತಿದ್ದರೆ ಅಂತಹ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸೂಕ್ತ ರೀತಿಯಲ್ಲಿ ದೂರು ಸಲ್ಲಿಸಲು ಲೋಕಾಯುಕ್ತ ಸಂಸ್ಥೆಯಲ್ಲಿ ವ್ಯವಸ್ಥೆ ಮಾಡಲಾಗಿರುತ್ತದೆ. ಫಿರ್ಯಾದುದಾರರು ತಮ್ಮ ದೂರುಗಳ ಮೇಲಿನ ತನಿಖೆ ವಿವರವನ್ನು ವೆಬ್‌ಸೈಟ್ ಅಥವಾ ಲಿಖಿತ ಅರ್ಜಿ ಸಲ್ಲಿಸಿ, ಮಾಹಿತಿಯನ್ನು ಪಡೆಯಬಹುದಾಗಿದೆ.

ಸರ್ಕಾರದ ನಡವಳಿಕೆ ಸಂಖ್ಯೆ: ಸಿಆಸುಇ 32 ಸೇಇವಿ 99 ದಿ: 02-07-2001ರಲ್ಲಿ ತಿಳಿಸಿರುವಂತೆ ಸಾರ್ವಜನಿಕರಿಗೆ ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು/ನೌಕರರು ತಮ್ಮ ದಿನನಿತ್ಯ ಕೆಲಸಗಳನ್ನು ನಿರ್ವಹಿಸಲು ಅನಗತ್ಯ ವಿಳಂಬ ಮಾಡಿದ್ದಲ್ಲಿ ಅಥವಾ ನಿರ್ಲಕ್ಷ್ಯ ತೋರಿದಲ್ಲಿ ಕೂಡಲೇ ವಿವರಗಳೊಂದಿಗೆ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡಗಳು, ಬೆಂಗಳೂರು ಅವರಿಗೆ ಪ್ರಪತ್ರ-I ಮತ್ತು ಪ್ರಪತ್ರ- II ರ ಮೂಲಕ ಸಲ್ಲಿಸಬಹುದಾಗಿದೆ.

ಸದರಿ ಆದೇಶದಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಮೇಲೆ ನಮೂದಿಸಿರುವಂತೆ ನಾಮಫಲಕ ಹಾಕಲು ಸರ್ಕಾರವು ಈಗಾಗಲೇ ಆದೇಶ ಮಾಡಿರುತ್ತದೆ. ಸಾರ್ವಜನಿಕರು ಈ ಸೌಲಭ್ಯವನ್ನು ಉಪಯೋಗಿಸಿಕೊಳ್ಳಬಹುದು.

ಲೋಕಾಯುಕ್ತ ಸಂಸ್ಥೆಯು ಈ ರೀತಿಯಾಗಿ ಸಾರ್ವಜನಿಕರ ಕುಂದುಕೊರತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸುತ್ತಿದೆ.